4. ಸರ್ಕಾರದ ಆದೇಶ ಸಂಖ್ಯೆ: ಆಕುಕ 185 ಹೆಚ್‌ಎಸ್‌ಹೆಚ್ 2002 ದಿನಾಂಕ 20.4.2002 ರನ್ವಯ ಖಾಸಗಿ ತಜ್ಞ ವೈದ್ಯರನ್ನು ಗೌರವಾರ್ಥ ತಜ್ಞ ವೈದ್ಯರಾಗಿ ನೇಮಕ ಮಾಡಲು ಜಿಲ್ಲಾಧಿಕಾರಿಗಳಿಗೆ ಅನುಮತಿ ನೀಡಲಾಗಿದೆ.

5. ಸರ್ಕಾರಿ ಆದೇಶ ಸಂಖ್ಯೆ: ಆಕುಕ 183 ಹೆಚ್‌ಎಸ್‌ಹೆಚ್ 02 ದಿನಾಂಕ 6.5.2002ರಲ್ಲಿ ನಿವೃತ್ತ ತಜ್ಞ ವೈದ್ಯರನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲು ಜಿಲ್ಲಾಧಿಕಾರಿಗಳಿಗೆ ಅನುಮತಿ ನೀಡಲಾಗಿದೆ.

6. ಖಾಲಿ ಇರುವ ಆರೆ ವೈದ್ಯಕೀಯ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಜಿಲ್ಲಾಧಿಕಾರಿಗಳಿಗೆ ತಿಳಿಸಲಾಗಿರುವುದರಿಂದ ಜನರಿಗೆ ತೊಂದರೆ ಆಗದಂತೆ ಕ್ರಮ ಕೈಗೊಳ್ಳಲಾಗಿದೆ.

ವಿಶೇಷ ನೇರ ನೇಮಕಾತಿ ಸಮಿತಿ ಮುಖಾಂತರ ನೇಮಕ ಮಾಡುವ ಕಾರ್ಯ ಪ್ರಕ್ರಿಯೆಯಲ್ಲಿರುತ್ತದೆ. ಹಾಗೂ ಕೆಲವು ಬ್ಯಾಕ್‌ಲಾಗ್ ಹುದ್ದೆಗಳನ್ನು ಗುರುತಿಸಿದ್ದು ಅತಿ ಶೀಘ್ರದಲ್ಲಿಯೇ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಔರಾದ ತಾಲ್ಲೂಕಿನಲ್ಲಿ ವಯಸ್ಕರ ಶಿಕ್ಷಣ ಕೇಂದ್ರಗಳ ಪ್ರಾರಂಭ

1476(1991) ಶ್ರೀ ಗುಂಡಪ್ಪ ವಕೀಲ್ (ಔರಾದ): ಮಾನ್ಯ ವಯಸ್ಕರ ಶಿಕ್ಷಣ, ಗ್ರಂಥಾಲಯಗಳು ಮತ್ತು ಮುದ್ರಣ ಹಾಗೂ ಲೇಖನ ಸಾಮಗ್ರಿಗಳ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ಬೀದರ್ ಜಿಲ್ಲೆಯ ಔರಾದ್ ತಾಲ್ಲೂಕಿನ ಎಷ್ಟು ಲಮಾಣಿ ಥಾಂಡಾಗಳಲ್ಲಿ ಸಾಕ್ಷರತಾ ಆಂದೋಲನ ಕಾರ್ಯಕ್ರಮವನ್ನು ಕೈಗೆತ್ತಿಕೊಳ್ಳಲಾಗಿದೆ;

ಆ. ಇಲ್ಲದಿದ್ದಲ್ಲಿ, ಕಾರಣಗಳೇನು; ವಯಸ್ಕರ ಶಿಕ್ಷಣ ಕೇಂದ್ರಗಳನ್ನು ಪ್ರಾರಂಭಿಸಲು ಸರ್ಕಾರದಿಂದ ಆದೇಶ ನೀಡಲಾಗಿದೆಯೇ; ಈ ಆದೇಶವನ್ನು ಜಿಲ್ಲಾಧಿಕಾರಿಗಳು ಪಾಲಿಸಿರುವರೇ?

ಶ್ರೀ ಬಾಬುರಾವ್ ಚವ್ಹಾಣ (ವಯಸ್ಕರ ಶಿಕ್ಷಣ, ಗ್ರಂಥಾಲಯಗಳು ಮತ್ತು ಮುದ್ರಣ ಹಾಗೂ ಲೇಖನ ಸಾಮಗ್ರಿಗಳ ರಾಜ್ಯ ಸಚಿವರು)

ಅ. ಬೀದರ್ ಜಿಲ್ಲೆಯ ಔರಾದ್ ತಾಲ್ಲೂಕಿನಲ್ಲಿ ಸಾಕ್ಷರತಾ ಆಂದೋಲನ ಮುಂದುವರಿದ ಯೋಜನೆಯಾದ ಮುಂದುವರಿಕೆ ಶಿಕ್ಷಣ ಕಾರ್ಯಕ್ರಮದಡಿಯಲ್ಲಿ ಕೆಳಕಂಡ ಲಂಬಾಣಿ ಥಾಂಡಾಗಳಲ್ಲಿ ಮುಂದುವರಿಕೆ ಶಿಕ್ಷಣ ಕೇಂದ್ರಗಳನ್ನು ಪ್ರಾರಂಭಿಸಲಾಗಿದೆ.

1. ಸೋಮಲನಾಯಕ ಥಾಂಡಾ
2. ಏಕಾಂಬ ಥಾಂಡಾ
3. ಚಿಂತಾಕಿ ಥಾಂಡಾ
4. ಏಕಲಾರ ಥಾಂಡಾ

ಆ. ರಾಷ್ಟ್ರೀಯ ಸಾಕ್ಷರತಾ ಮಿಷನ್ ಪ್ರಾಧಿಕಾರವು ಬೀದರ್ ಜಿಲ್ಲೆಗೆ ಮುಂದುವರಿಕೆ ಶಿಕ್ಷಣ ಕಾರ್ಯಕ್ರಮವನ್ನು ಮಂಜೂರು ಮಾಡಿರುವ ಆದೇಶವನ್ನು ಕರ್ನಾಟಕ ರಾಜ್ಯ ಸಾಕ್ಷರತಾ ಮಿಷನ್ ಪ್ರಾಧಿಕಾರವು ಜಿಲ್ಲಾ ಸಾಕ್ಷರತಾ ಸಮಿತಿಯ ಅಧ್ಯಕ್ಷರಾಗಿರುವ ಜಿಲ್ಲಾಧಿಕಾರಿ, ಬೀದರ್ ಇವರಿಗೆ ಕಳುಹಿಸಲಾಗಿದೆ. ರಾಷ್ಟ್ರೀಯ ಸಾಕ್ಷರತಾ ಮಿಷನ್ ಪ್ರಾಧಿಕಾರದ ಮಾರ್ಗಸೂಚಿಯನ್ನು ಪಾಲಿಸುತ್ತಿರುವರು.